# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 212 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14.02.2024 |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಖಾಲಿಯಿರುವ ಎಷ್ಟು ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇಮಕಾತಿಗಾಗಿ ಪ್ರಕ್ರಿಯೆಯನ್ನು ಆರಂಭಿಸಲಾಗಿದೆ; | ರಾಜ್ಯದ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಖಾಲಿ ಇರುವ 1,000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇಮಕಾತಿಯನ್ನು ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿರುತ್ತದೆ. |
| (ಆ) | ಎಷ್ಟು ಹುದ್ದೆಗಳ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ; ಯಾವ ಕಾಲಮಿತಿಯಲ್ಲಿ ಈ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಲಾಗುವುದು; | |
| (ಇ) | ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇಮಕಾತಿಗಾಗಿ ಸರ್ಕಾರವು ನಿಗಧಿಪಡಿಸಿರುವ ವಯೋಮಿತಿ ಮತ್ತು ಪಠ್ಯಕ್ರಮದ ಬಗ್ಗೆ ವಿವರವನ್ನು ನೀಡುವುದು; | ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇಮಕಾತಿಗಾಗಿ ಸರ್ಕಾರವು ವಯೋಮಿತಿಯನ್ನು ಈ ಕೆಳಗಿನಂತೆ ನಿಗಧಿ ಪಡಿಸಿದೆ.<br><br>**ಪ್ರವರ್ಗ** / **ಕನಿಷ್ಠ** / **ಗರಿಷ್ಠ**<br>ಪ.ಜಾ/ಪ.ಪಂ/ಪ್ರ-1 / 18 ವರ್ಷ / 40 ವರ್ಷ<br>2ಎ, 2ಬಿ, 3ಎ, 3ಬಿ / 18 ವರ್ಷ / 38 ವರ್ಷ<br>ಸಾಮಾನ್ಯ ವರ್ಗ / 18 ವರ್ಷ / 35 ವರ್ಷ<br><br>ಹಾಗೂ ಪಠ್ಯ ಕ್ರಮವನ್ನು ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ರಲ್ಲಿ ನಿಗದಿಪಡಿಸಿರುವಂತೆ ಅಳವಡಿಸಲಾಗುವುದು. |
| (ಈ) | ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳನ್ನು ನೇಮಕಮಾಡಿಕೊಳ್ಳಲು ಯಾವ ಪರೀಕ್ಷಾ ಆಯೋಗ/ ಪ್ರಾಧಿಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ; ಕರ್ನಾಟಕ ಲೋಕ ಸೇವಾ ಆಯೋಗದಲ್ಲಿ ಈಗಾಗಲೇ ಸಾಕಷ್ಟು ವಿವಿಧ ಹುದ್ದೆಗಳ ನೇಮಕಾತಿಯು ಅಂತಿಮ ಫಲಿತಾಂಶ ಬಿಡುಗಡೆಯಾಗದೇ ಹಲವಾರು ವರ್ಷಗಳ ಕಾಲ ವಿಳಂಬವಾಗುತ್ತಿರುವ ಕಾರಣ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆ.ಇ.ಎ) ಅಥವಾ ಯಾವುದಾದರು ಸಾಂವಿಧಾನಿಕ ಪರೀಕ್ಷಾ ಸಂಸ್ಥೆಗೆ ಈ ನೇಮಕಾತಿಯ ಜವಾಬ್ದಾರಿಯನ್ನು ನೀಡಲು ಸರ್ಕಾರ ಕ್ರಮಕೈಗೊಳ್ಳುವುದೇ; ಈ ಕುರಿತು ಸ್ಪಷ್ಟನೆ ನೀಡುವುದು? | ಮೇಲೆ ವಿವರಿಸಿರುವಂತೆ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. |

**(ಸಂಖ್ಯೆ:ಕಂಇ 26 ಬಿಎಸ್‌ಸಿ 2024)**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು